17-12-2022
UDAYAVANI - MANIPAL

# ಕಸ್ತೂರ್ಬಾ ಆಸ್ಪತ್ರೆಯ ಕಾರ್ಪೊರೇಟ್ ಕ್ರಿಕೆಟ್ ಲೀಗ್ ಉದ್ಘಾಟನೆ



**ಮಣಿಪಾಲ, ಡಿ. 16:** ಕಸ್ತೂರ್ಬಾ ಆಸ್ಪತ್ರೆಯು ಕಾರ್ಪೊರೇಟ್ ಕಂಪೆನಿ, ಬ್ಯಾಂಕ್, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್-ಸಿಸಿಎಲ್)-2022 ಆಯೋಜಿಸಿದ್ದು ಶುಕ್ರವಾರ ಎಂಡ್ ಪಾಯಿಂಟ್ ಕ್ರಿಕೆಟ್ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾಹೆ ಸಹಕುಲಾಧಿಪತಿ ಡಾ| ಎಚ್.ಎಸ್. ಬಲ್ಲಾಳ್ ಟ್ರೋಫಿ ಅನಾವರಣಗೊಳಿಸಿ, ಮೊದಲ ಪಂದ್ಯಕ್ಕೆ ಟಾಸ್ ಮಾಡುವುದರ ಮೂಲಕ ಚಾಲನೆ ನೀಡಿದರು.

ಕುಲಪತಿ ಲೆ| ಜ| ಡಾ|ಎಂ.ಡಿ. ವೆಂಕಟೇಶ್ ಅವರು ಕಸ್ತೂರ್ಬಾ ಆಸ್ಪತ್ರೆಯ 2023ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ಸ್ ಡೀನ್ ಡಾ| ಜಿ.ಅರುಣ್ ಮಯ್ಯ, ಮಾಹೆ ಸಿಒಒ ಸಿ.ಜಿ.ಮುತ್ತಣ್ಣ, ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ| ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ರಿಕೆಟ್ ಪಂದ್ಯಾಕೂಟ ಡಿ.16ರಿಂದ 18ರ ವರೆಗೆ ಮಣಿಪಾಲದ ಎಂಡ್ ಪಾಯಿಂಟ್ ಮೈದಾನದಲ್ಲಿ ನಡೆಯಲಿದೆ. ಕರ್ನಾಟಕದ ಬೇರೆ ಬೇರೆ ಜಿಲ್ಲೆಗಳ ಸುಮಾರು 24 ತಂಡಗಳು ಈ ವರ್ಷ ಭಾಗವಹಿಸಲಿದೆ.

ಪ್ರಜಾವಾಣಿ

ಶನಿವಾರ • ಡಿಸೆಂಬರ್ 17, 2022

# ಕೆಎಂಸಿ ಕಾರ್ಪೊರೇಟ್ ಕ್ರಿಕೆಟ್ ಲೀಗ್ ಆರಂಭ



ಉಡುಪಿ: ಮಣಿಪಾಲದ ಕಸ್ತೂರಬಾ ಆಸ್ಪತ್ರೆಯ ವತಿಯಿಂದ ಆಯೋಜಿಸಿರುವ ಕಾರ್ಪೊರೇಟ್ ಕ್ರಿಕೆಟ್ ಲೀಗ್‌ಗೆ ಶುಕ್ರವಾರ ಎಂಡ್‌ಪಾಯಿಂಟ್ ಕ್ರೀಡಾಂಗಣದಲ್ಲಿ ಮಾಹೆ ಸಹ ಕುಲಾಧಿಪತಿ ಡಾ.ಎಚ್.ಎಸ್.ಬಲ್ಲಾಳ್ ಟ್ರೋಫಿ ಅನಾವರಣ ಮಾಡುವ ಮೂಲಕ ಚಾಲನೆ ನೀಡಿದರು.

ಬಳಿಕ ಮಾತನಾಡಿ, 'ಮಾಹೆ ಮಣಿಪಾಲ ಕ್ರೀಡಾ ಚಟುವಟಿಕೆಗಳಿಗೆ ಹಿಂದಿನಿಂದಲೂ ಪ್ರೋತ್ಸಾಹ ನೀಡುತ್ತ ಬಂದಿದ್ದು ಈ ಬಾರಿಯೂ ಯಶಸ್ವಿಯಾಗಿ ಕಾರ್ಪೊರೇಟ್ ಕ್ರಿಕೆಟ್ ಲೀಗ್ ಆಯೋಜಿಸಿದೆ ಎಂದರು.

ಮಾಹೆ ಮಣಿಪಾಲದ ಉಪ ಕುಲಪತಿ ಲೆಫ್ಟಿನೆಂಟ್ ಜನರಲ್ ಎಂ.ಡಿ. ವೆಂಕಟೇಶ್ ಕಸ್ತೂರಬಾ ಆಸ್ಪತ್ರೆಯ ಕ್ಯಾಲೆಂಡರ್ ಬಿಡುಗಡೆ ಮಾಡಿದರು.

ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಷನ್ಸ್ ಡೀನ್ ಡಾ.ಜಿ. ಅರುಣ್ ಮಯ್ಯ, ಮಾಹೆ ಸಿಒಒ ಸಿ.ಜಿ.ಮುತ್ತಣ್ಣ, ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ.ಆನಂದ್ ವೇಣುಗೋಪಾಲ್ , ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ ಶೆಟ್ಟಿ ಇದ್ದರು.

ಕಾರ್ಪೊರೇಟ್ ಕಂಪೆನಿ, ಬ್ಯಾಂಕ್, ವೈದ್ಯಕೀಯ ಸಂಘ, ಆಸ್ಪತ್ರೆಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಕ್ರಿಕೆಟ್‌ಲೀಗ್‌ನಲ್ಲಿ ಭಾಗವಹಿಸಿದ್ದು ಡಿ.18ರವರೆಗೂ ನಡೆಯಲಿದೆ.

ಕನ್ನಡಪ್ರಭ
ಶನಿವಾರ 17.12.2022

# ಮಣಿಪಾಲ: ಕ್ರಿಕೆಟ್ ಲೀಗ್‌ಗೆ ಚಾಲನೆ



ಕಸ್ತೂರ್ಬಾ ಆಸ್ಪತ್ರೆ - ಕಾರ್ಪೊರೇಟ್ ಕ್ರಿಕೆಟ್ ಲೀಗ್‌ಗೆ ಚಾಲನೆ ನೀಡಲಾಯಿತು.

• **ಕನ್ನಡಪ್ರಭ ವಾರ್ತೆ** ಮಣಿಪಾಲ

ಇಲ್ಲಿನ ಕಸ್ತೂರ್ಬಾ ಆಸ್ಪತ್ರೆಯು ಕಾರ್ಪೊರೇಟ್ ಕಂಪನಿ, ಬ್ಯಾಂಕ್‌ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಪತ್ರಕರ್ತರ ತಂಡಗಳಿಗಾಗಿ ಆಯೋಜಿಸಿರುವ 3 ದಿನಗಳ ಕಸ್ತೂರ್ಬಾ ಆಸ್ಪತ್ರೆ- ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್ -ಸಿಸಿಎಲ್) 2022ನ್ನು ಶುಕ್ರವಾರ ಮಣಿಪಾಲ ಎಂಡ್ ಪಾಯಿಂಟ್ ಕ್ರೀಡಾಂಗಣದಲ್ಲಿ ಮಾಹೆಯ ಸಹಕುಲಾಧಿಪತಿ ಡಾ.ಎಚ್.ಎಸ್. ಬಲ್ಲಾಳ್ ಅವರು ಟ್ರೋಫಿ ಅನಾವರಣ ಮಾಡಿ, ಮೊದಲ ಪಂದ್ಯಕ್ಕೆ ಟಾಸ್ ಮಾಡುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಮಾಹೆ ಮಣಿಪಾಲವು ಎಂದಿಗೂ ಕ್ರೀಡೆ ಮತ್ತು ಇತರ ಪಠ್ಯೇತರ ಚಟುವಟಿಕೆಗಳಿಗೆ ಪೂರ್ಣ ಬೆಂಬಲ ನೀಡುತ್ತಿದೆ. ಇದರ ಅಂಗವಾಗಿ ಕೆಎಚ್ -ಸಿಸಿಎಲ್ - 2022ನ್ನು ಆಯೋಜಿಸಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಹೆ ಉಪಕುಲಪತಿ ಲೆ.ಜ. (ಡಾ) ಎಂ.ಡಿ. ವೆಂಕಟೇಶ್ ಅವರು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ 2022ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ಸ್‌ನ ಡೀನ್ ಡಾ.ಜಿ. ಅರುಣ್ ಮಯ್ಯ, ಮಾಹೆಯ ಸಿಒಒ ಸಿ.ಜಿ. ಮುತ್ತಣ್ಣ, ಮಣಿಪಾಲ ಬೋಧನಾ ಆಸ್ಪತ್ರೆಗಳ ಸಿಒಒ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಈ ಟೂರ್ನಮೆಂಟ್ ಡಿ.16ರಿಂದ 18ರವರೆಗೆ ನಡೆಯಲಿದೆ, ಕರ್ನಾಟಕದ ಬೇರೆ ಬೇರೆ ಜಿಲ್ಲೆಗಳ ಸುಮಾರು 24 ತಂಡಗಳು ಈ ವರ್ಷ ಭಾಗವಹಿಸುತ್ತಿವೆ.

THE TIMES OF INDIA, MANGALURU
SATURDAY, DECEMBER 17, 2022

## Cricket league for three days

Kasturba Hospital Manipal organised the Corporate Cricket League (KH CCL) for three days. Dr HS Ballal, pro-chancellor, MAHE, Manipal, inaugurated the KH-CCL 2021 tournament by unveiling the trophy, and by performing the toss for the first match. The cricket tournament will be held at the Manipal End Point ground from Friday to Sunday.

THE TIMES OF INDIA, MANGALURU
MONDAY, DECEMBER 19, 2022

## Manipal Tech wins cricket league trophy

**Mangaluru:** Manipal Technologies Ltd won the Kasturba Hospital Manipal Corporate Cricket League (CCL2021) trophy and SP Office-11 was the runner-up at the Corporate Cricket League (CCL 2022) organised by Kasturba Hospital Manipal for corporate companies, banks, medical associations, hospitals, and media. The matches which began on December 16 ended on Sunday.

Hakey Akshay Machhindra, SP of Udupi district, was the chief guest. Prashanth was the Man of the Series, Karthik Bhat was the Best Batsman and Siddesh received Best Bowler. All participating teams contributed a total sum of Rs 1.20 lakh towards that paediatric haematology and oncology fund. The cheque was handed over to Dr Vasudeva Bhat. TNN

ವಿಜಯ ಕರ್ನಾಟಕ

ಸೋಮವಾರ,19 ಡಿಸೆಂಬರ್ 2022,
ಮಂಗಳೂರು

# ಕಸ್ತೂರ್ಬಾ ಆಸ್ಪತ್ರೆಯ ಕಾರ್ಪೊರೇಟ್ ಕ್ರಿಕೆಟ್ ಲೀಗ್ ಸಮಾರೋಪ

## ಮಣಿಪಾಲ ಟೆಕ್ನಾಲಜಿ ಲಿಮಿಟೆಡ್‌ಗೆ ಕೆಎಚ್ ಸಿಸಿಎಲ್-2022 ಪ್ರಶಸ್ತಿ




**ವಿಕ ಸುದ್ದಿಲೋಕ** ಉಡುಪಿ

ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪನಿ, ಬ್ಯಾಂಕ್‌ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಆಯೋಜಿಸಿದ್ದ ಕಾರ್ಪೊರೇಟ್ ಕ್ರಿಕೆಟ್ ಲೀಗ್( ಕೆಎಚ್‌ಸಿಸಿಎಲ್ 2022) ಕೂಟ ಭಾನುವಾರ ಸಮಾರೋಪಗೊಂಡಿತು.

ಸಮಾರೋಪದಲ್ಲಿ ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಕೆ ಅಕ್ಷಯ್ ಮಚ್ಚೀಂದ್ರ ಪಾಲ್ಗೊಂಡಿದ್ದರು. ಎಲ್ಲ ತಂಡಗಳು ಒಟ್ಟುಗೂಡಿ 1,20,000 ರೂ. ಮೊತ್ತವನ್ನು ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕಾಲಜಿ ವಿಭಾಗ ನಿಧಿಗೆ ದೇಣಿಗೆಯಾಗಿ ನೀಡಿದರು. ಈ ಉದಾತ್ತ ಕಾರ್ಯ ಹೆಚ್ಚು ಮೆಚ್ಚುಗೆ ಪಡೆದಿದೆ.

ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕಾಲಜಿ ವಿಭಾಗದ ವಿಭಾಗ ಮುಖ್ಯಸ್ಥ ಡಾ. ವಾಸುದೇವ ಭಟ್ ಅವರಿಗೆ ಚೆಕ್ ಹಸ್ತಾಂತರಿಸಲಾಯಿತು.

ಕೆಎಂಸಿ ಡೀನ್ ಡಾ. ಶರತ್ ಕೆ. ರಾವ್, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ, ಡಾ. ಕೀರ್ತಿನಾಥ್ ಬಲ್ಲಾಳ್, ಸಚಿನ್ ಕಾರಂತ್, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್‌ಸಿಸಿ ಎಲ್ 2022) ನಲ್ಲಿ ಮಣಿಪಾಲ ಟೆಕ್ನಾಲಜಿ ಲಿಮಿಟೆಡ್ ಅವರು ವಿಜೇತರಾಗಿ ಉಡುಪಿ ಎಸ್‌ಪಿ ಇಲೆವೆನ್ ರನ್ನರ್ ಅಪ್ ಪ್ರಶಸ್ತಿ ಪಡೆದರು. ಪ್ರಶಾಂತ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ಕಾರ್ತಿಕ್ ಉತ್ತಮ ದಾಂಡಿಗ ಮತ್ತು ಸಿದ್ದೇಶ್ ಉತ್ತಮ ದಾಳಿಗಾರ ಪ್ರಶಸ್ತಿಗೆ ಭಾಜನರಾದರು.

### ಕಾರ್ಪೊರೇಟ್ ಕ್ರಿಕೆಟ್ ಲೀಗ್ ಉದ್ಘಾಟನೆ

**ಉಡುಪಿ:** ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯ ವತಿಯಿಂದ ಕಾರ್ಪೊರೇಟ್ ಕಂಪನಿ, ಬ್ಯಾಂಕ್‌ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ ಆಯೋಜಿಸಲಾದ 3 ದಿನಗಳ ಸೌಹಾರ್ದಯುತ 'ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ ' ಪಂದ್ಯಾವಳಿಗೆ ಮಾಹೆ ಸಹ ಕುಲಾಧಿಪತಿ ಡಾ. ಎಚ್.ಎಸ್. ಬಲ್ಲಾಳ್ ಶುಕ್ರವಾರ ಚಾಲನೆ ನೀಡಿದರು.

ಈ ಸಂದರ್ಭ ಮಾಹೆ ಉಪ ಕುಲಪತಿ ಡಾ.ಎಂ.ಡಿ. ವೆಂಕಟೇಶ್ ಅವರು ಕಸ್ತೂರ್ಬಾ ಆಸ್ಪತ್ರೆಯ 2023ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು.

ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಷನ್ಸ್‌ನ ಡೀನ್ ಡಾ.ಜಿ. ಅರುಣ್ ಮಯ್ಯ, ಮಾಹೆ ಮಣಿಪಾಲದ ಸಿಒಒ ಸಿ.ಜಿ. ಮುತ್ತಣ್ಣ, ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

19-12-2022
UDAYAVANI - MANIPAL

### ▶ಕಸ್ತೂರ್ಬಾ ಆಸ್ಪತ್ರೆ: ಕ್ರಿಕೆಟ್ ಲೀಗ್ ಸಮಾಪನ

# ಮಣಿಪಾಲ ಟೆಕ್ನಾಲಜೀಸ್‌ಗೆ ಪ್ರಶಸ್ತಿ




**ಮಣಿಪಾಲ, ಡಿ. 18:** ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪೆನಿ, ಬ್ಯಾಂಕ್‌ಗಳು, ವೈದ್ಯಕೀಯ ಸಂಘ, ಆಸ್ಪತ್ರೆ ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ನಡೆಸಿದ ಸೌಹಾರ್ದ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್ ಸಿಸಿಎಲ್ 2022)ನಲ್ಲಿ ಮಣಿಪಾಲ ಟೆಕ್ನಾಲಜೀಸ್ ಲಿ. ವಿಜೇತರಾದರು.

ಸಮಾರೋಪದಲ್ಲಿ ಮುಖ್ಯ ಅತಿಥಿಯಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಕೆ ಅಕ್ಷಯ್ ಮಚ್ಚೀಂದ್ರ ಪಾಲ್ಗೊಂಡಿದ್ದರು. ಎಲ್ಲ ತಂಡಗಳು ಒಟ್ಟುಗೂಡಿ 1.2 ಲ.ರೂ.ಗಳನ್ನು ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ ನಿಧಿಗೆ ದೇಣಿಗೆಯಾಗಿ ವಿಭಾಗದ ಮುಖ್ಯಸ್ಥ ಡಾ| ವಾಸುದೇವ ಭಟ್ ಅವರಿಗೆ ಹಸ್ತಾಂತರಿಸಲಾಯಿತು.

ಕೆಎಂಸಿ ಡೀನ್ ಡಾ| ಶರತ್ ಕೆ.ರಾವ್, ಮಾಹೆಮಣಿಪಾಲದಬೋಧನಆಸ್ಪತ್ರೆಗಳ ಸಿಒಒ ಡಾ| ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ ಶೆಟ್ಟಿ ಇದ್ದರು. ಉಡುಪಿ ಎಸ್‌ಪಿ 11 ರನ್ನರ್ ಅಪ್ ಪ್ರಶಸ್ತಿ ಪಡೆದರು. ಪ್ರಶಾಂತ್ ಸರಣಿ ಶ್ರೇಷ್ಠ, ಕಾರ್ತಿಕ್ ಅವರು ಉತ್ತಮ ಬ್ಯಾಟ್ಸ್‌ಮ್ಯಾನ್ ಮತ್ತು ಸಿದ್ದೇಶ್ ಅವರು ಉತ್ತಮ ಬೌಲರ್ ಪ್ರಶಸ್ತಿ ಪಡೆದರು.

ವಿಜಯವಾಣಿ
VIJAYAVANI » MANGALURU
ಸೋಮವಾರ 19 ಡಿಸೆಂಬರ್ 2022
19 DECEMBER 2022

# ಕಸ್ತೂರ್ಬಾ ಆಸ್ಪತ್ರೆ ಕ್ರಿಕೆಟ್ ಲೀಗ್ ಸಂಪನ್ನ



ಕಸ್ತೂರ್ಬಾ ಆಸ್ಪತ್ರೆಯ ಕಾರ್ಪೊರೇಟ್ ಕ್ರಿಕೆಟ್‌ಲೀಗ್ ಕ್ರಿಕೆಟ್ ಪಂದ್ಯಾಟದಲ್ಲಿ ವಿಜೇತ ಮಣಿಪಾಲ ಟೆಕ್ನಾಲಜಿ ಲಿಮಿಟೆಡ್ ತಂಡ.

■ ವಿಜಯವಾಣಿ ಸುದ್ದಿಜಾಲ ಉಡುಪಿ

ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕಾರ್ಪೊರೇಟ್ ಕಂಪನಿ, ಬ್ಯಾಂಕ್‌ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತ ಕಾರ್ಪೊರೇಟ್ ಕ್ರಿಕೆಟ್‌ಲೀಗ್ ( ಕೆಎಚ್‌ಸಿಎಲ್ -2022) ಆಯೋಜಿಸಿತ್ತು. ಶುಕ್ರವಾರ ಆರಂಭವಾದ ಕೂಟ ಭಾನುವಾರ ಅಂತ್ಯಗೊಂಡಿತು. ಸಮಾರೋಪ ಸಮಾರಂಭದಲ್ಲಿ ಮುಖ್ಯಅತಿಥಿಯಾಗಿ ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಕೆ ಅಕ್ಷಯ್ ಮಚ್ಚೀಂದ್ರ ಪಾಲ್ಗೊಂಡಿದ್ದರು.

ಎಲ್ಲ ತಂಡಗಳು ಒಟ್ಟುಗೂಡಿ 1,20,000 ರೂ. ಮೊತ್ತವನ್ನು ಮಕ್ಕಳ ರಕ್ತ ಶಾಸ್ತ್ರ ಮತ್ತು ಅಂಕೊಲಾಜಿ ವಿಭಾಗ ನಿಧಿಗೆ ದೇಣಿಗೆಯಾಗಿ ನೀಡಿದರು. ಈ ಉದಾತ್ತ ಕಾರ್ಯ ಮೆಚ್ಚುಗೆ ಪಡೆದಿದೆ. ಚೆಕ್ ಅನ್ನು ಮಕ್ಕಳ ರಕ್ತ ಶಾಸ್ತ್ರ ಮತ್ತು ಅಂಕೊಲಾಜಿ ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಅವರಿಗೆ ಹಸ್ತಾಂತರಿಸಲಾಯಿತು.

ಕೆಎಂಸಿ ಡೀನ್ ಡಾ. ಶರತ್ ಕೆ. ರಾವ್, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ. ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ, ಡಾ ಕೀರ್ತಿನಾಥ್ ಬಲ್ಲಾಳ, ಸಚಿನ್ ಕಾರಂತ್ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಮಣಿಪಾಲ ಟೆಕ್ನಾಲಜಿ ಲಿಮಿಟೆಡ್ ವಿನ್ನರ್ ಮತ್ತು ಉಡುಪಿ ಎಸ್‌ಪಿ -11 ರನ್ನರ್ ಅಪ್ ಪ್ರಶಸ್ತಿ ಪಡೆಯಿತು. ಪ್ರಶಾಂತ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ಕಾರ್ತಿಕ್ ಅವರು ಉತ್ತಮ ದಾಂಡಿಗ ಮತ್ತು ಸಿದ್ದೇಶ್ ಉತ್ತಮ ದಾಳಿಗಾರ ಪ್ರಶಸ್ತಿ ಪಡೆದರು.

# ಕಾರ್ಪೊರೇಟ್ ಕ್ರಿಕೆಟ್ ಲೀಗ್ ಗೆ ಚಾಲನೆ

By **lokabandhu news desk** December 16, 2022

Share




**ಲೋಕಬಂಧು ವಾರ್ತೆ**
**ಶುಕ್ರವಾರ, ಡಿಸೆಂಬರ್ 16**

**ಕಾರ್ಪೊರೇಟ್ ಕ್ರಿಕೆಟ್ ಲೀಗ್ ಗೆ ಚಾಲನೆ**

**ಉಡುಪಿ:** ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ ಆಶ್ರಯದಲ್ಲಿ ಕಾರ್ಪೊರೇಟ್ ಕಂಪನಿ, ಬ್ಯಾಂಕ್ ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಪತ್ರಕರ್ತರಿಗಾಗಿ ಆಯೋಜಿಸಲಾದ 3 ದಿನಗಳವಧಿಯ ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್-ಸಿಸಿಎಲ್)ಗೆ ಶುಕ್ರವಾರ ಮಾಹೆ ಮಣಿಪಾಲ ಸಹ ಕುಲಾಧಿಪತಿ ಡಾ. ಎಚ್. ಎಸ್. ಬಲ್ಲಾಳ್ ಟ್ರೋಫಿ ಅನಾವರಣಗೊಳಿಸಿ ಮೊದಲ ಪಂದ್ಯಕ್ಕೆ ಟಾಸ್ ಮಾಡುವ ಮೂಲಕ ಚಾಲನೆ ನೀಡಿದರು.




ಮಾಹೆ ಮಣಿಪಾಲ ಕ್ರೀಡೆ ಮತ್ತಿತರ ಪಠ್ಯೇತರ ಚಟುವಟಿಕೆಗಳಿಗೆ ಸದಾ ಬೆಂಬಲ ನೀಡುತ್ತದೆ ಎಂದರು. ಮಾಹೆ ಮಣಿಪಾಲ ಉಪಕುಲಪತಿ ಲೆ| ಜ| (ಡಾ.) ಎಂ. ಡಿ. ವೆಂಕಟೇಶ್ ಆಸ್ಪತ್ರೆಯ 2023ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು.

ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಷನ್ಸ್ ಡೀನ್ ಡಾ. ಜಿ. ಅರುಣ್ ಮಯ್ಯ, ಮಾಹೆ ಮಣಿಪಾಲ ಸಿಒಒ ಸಿ. ಜಿ. ಮುತ್ತಣ್ಣ, ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ ಮೊದಲಾದವರಿದ್ದರು.




ಕ್ರಿಕೆಟ್ ಟೂರ್ನಮೆಂಟ್ ಡಿ. 18ರ ವರೆಗೆ ಮಣಿಪಾಲ ಎಂಡ್ ಪಾಯಿಂಟ್ ಮೈದಾನದಲ್ಲಿ ನಡೆಯುತ್ತಿದ್ದು, ರಾಜ್ಯದ ವಿವಿಧ ಜಿಲ್ಲೆಗಳ ಸುಮಾರು 24 ತಂಡಗಳು ಭಾಗವಹಿಸುತ್ತಿವೆ.

# ಕಸ್ತೂರ್ಬಾ ಆಸ್ಪತ್ರೆಯ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್) 2022 ಉದ್ಘಾಟನೆ

By Janardhan Kodavoor/Team karavalixpress, December 16, 2022



ಮಣಿಪಾಲ 16: ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪನಿ, ಬ್ಯಾಂಕ್ ಗಳು , ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್)2022 ಆಯೋಜಿಸಿದೆ.

ಇಂದು ನಡೆದ ಸರಳ ಕಾರ್ಯಕ್ರಮದಲ್ಲಿ ಮಾಹೆ ಮಣಿಪಾಲದ ಸಹ ಕುಲಾಧಿಪತಿ ಡಾ. ಎಚ್ ಎಸ್ ಬಲ್ಲಾಳ್ ಅವರು ಟ್ರೋಫಿ ಅನಾವರಣ ಮಾಡಿ ಮೊದಲ ಪಂದ್ಯಕ್ಕೆ ಟಾಸ್ ಮಾಡುವುದರ ಮೂಲಕ ಕಸ್ತೂರ್ಬಾ ಆಸ್ಪತ್ರೆ ಸಿ ಸಿ ಎಲ್ 2022 ಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅವರು ಮಾತನಾಡುತ್ತಾ "ಮಾಹೆ ಮಣಿಪಾಲವು ಯಾವಾಗಲೂ ಕ್ರೀಡೆ ಮತ್ತು ಇತರ ಪಠ್ಯೇತರ ಚಟುವಟಿಕೆಗಳಿಗೆ ತುಂಬಾ ಬೆಂಬಲ ನೀಡುತ್ತದೆ. ಇದರ ಅಂಗವಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್)2022 ಆಯೋಜಿಸಿದೆ" ಎಂದರು.

ಈ ಸಂದರ್ಭದಲ್ಲಿ ಮಾಹೆ ಮಣಿಪಾಲದ ಉಪ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ ಅವರು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ 2023ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಷನ್ಸ್ ಇದರ ಡೀನ್ ಡಾ ಜಿ ಅರುಣ್ ಮಯ್ಯ , ಮಾಹೆ ಮಣಿಪಾಲದ ಸಿ ಒ ಒ ಶ್ರೀ ಸಿ ಜಿ ಮುತ್ತಣ್ಣ , ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿ ಒ ಒ ಡಾ. ಆನಂದ್ ವೇಣುಗೋಪಾಲ್ , ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ರಿಕೆಟ್ ಟೂರ್ನಮೆಂಟ್ 16ನೇ ಡಿಸೆಂಬರ್ 2022ರಿಂದ 18ನೇ ಡಿಸೆಂಬರ್ 2022ರ ವರೆಗೆ ಮಣಿಪಾಲದ ಎಂಡ್ ಪಾಯಿಂಟ್ ಮೈದಾನದಲ್ಲಿ ನಡೆಯಲಿದೆ, ಕರ್ನಾಟಕದ ಬೇರೆ ಬೇರೆ ಜಿಲ್ಲೆಗಳ ಸುಮಾರು 24 ತಂಡಗಳು ಈ ವರ್ಷ ಭಾಗವಹಿಸುತ್ತಿವೆ.

ಉಡುಪಿ

# ಕಸ್ತೂರ್ಬಾ ಆಸ್ಪತ್ರೆಯ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್) 2022 ಉದ್ಘಾಟನೆ

6 days ago




ಮಣಿಪಾಲ 16ನೇ ಡಿಸೆಂಬರ್ 2022:ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪನಿ , ಬ್ಯಾಂಕ್ ಗಳು , ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್)2022 ಆಯೋಜಿಸಿದೆ. ಇಂದು ನಡೆದ ಸರಳ ಕಾರ್ಯಕ್ರಮದಲ್ಲಿ ಮಾಹೆ ಮಣಿಪಾಲದ ಸಹ ಕುಲಾಧಿಪತಿಗಳಾದ ಡಾ. ಎಚ್ ಎಸ್ ಬಲ್ಲಾಳ್ ಅವರು ಟ್ರೋಫಿ ಅನಾವರಣ ಮಾಡಿ ಮೊದಲ ಪಂದ್ಯಕ್ಕೆ ಟಾಸ್ ಮಾಡುವುದರ ಮೂಲಕ ಕಸ್ತೂರ್ಬಾ ಆಸ್ಪತ್ರೆ ಸಿ ಸಿ ಎಲ್ 2022 ಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಅವರು ಮಾತನಾಡುತ್ತಾ "ಮಾಹೆ ಮಣಿಪಾಲವು ಯಾವಾಗಲೂ ಕ್ರೀಡೆ ಮತ್ತು ಇತರ ಪಠ್ಯೇತರ ಚಟುವಟಿಕೆಗಳಿಗೆ ತುಂಬಾ ಬೆಂಬಲ ನೀಡುತ್ತದೆ. ಇದರ ಅಂಗವಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್)2022 ಆಯೋಜಿಸಿದೆ" ಎಂದರು.

ಈ ಸಂದರ್ಭದಲ್ಲಿ ಮಾಹೆ ಮಣಿಪಾಲದ ಉಪ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ ಅವರು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ 2023ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಮಣಿಪಾಲ್ ಕಾಲೇ ಜ್ ಆಫ್ ಹೆಲ್ತ್ ಪ್ರೊಫೆಷನ್ಸ್ ಇದರ ಡೀನ್ ಡಾ ಜಿ ಅರುಣ್ ಮಯ್ಯ , ಮಾಹೆ ಮಣಿಪಾಲದ ಸಿ ಒ ಒ ಶ್ರೀ ಸಿ ಜಿ ಮುತ್ತಣ್ಣ , ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿ ಒ ಒ ಡಾ. ಆನಂದ್ ವೇಣುಗೋಪಾಲ್ , ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ರಿಕೆಟ್ ಟೂರ್ನಮೆಂಟ್ 16ನೇ ಡಿಸೆಂಬರ್ 2022ರಿಂದ 18ನೇ ಡಿಸೆಂಬರ್ 2022ರ ವರೆಗೆ ಮಣಿಪಾಲದ ಎಂಡ್ ಪಾಯಿಂಟ್ ಮೈದಾನದಲ್ಲಿ ನಡೆಯಲಿದೆ, ಕರ್ನಾಟಕದ ಬೇರೆ ಬೇರೆ ಜಿಲ್ಲೆಗಳ ಸುಮಾರು 24 ತಂಡಗಳು ಈ ವರ್ಷ ಭಾಗವಹಿಸುತ್ತಿವೆ.

ವೈದ್ಯಕೀಯ ಅಧೀಕ್ಷಕರು

THE CANARA POST

# Manipal: Kasturba Hospital Corporate Cricket League 2022 inaugurated



**Manipal, Dec 16, 2022:** Kasturba Hospital Corporate Cricket League (KH-CCL) 2022 was inaugurated at Manipal today.

Kasturba Hospital Manipal is organizing the Corporate Cricket League (KH CCL) for corporate companies, banks, medical associations, and media for 3 days.

The cricket tournament will be held at the Manipal End Point ground from Dec 16 to Dec 18. As many as 24 teams will participate from various districts of Karnataka.

Dr. H S Ballal, Pro-Chancellor, MAHE, Manipal inaugurated the KH – CCL 2021 tournament by unveiling the trophy.

"MAHE has always been very supportive of sports. As a part of this Kasturba Hospital is organizing this corporate cricket league 2022. We are holding this event for the last two years," he said.

Lt Gen (Dr) M D Venkatesh, Vice-chancellor, MAHE Manipal on this occasion released the Kasturba Hospital 2023 calendar and gave his best wishes to all the teams.

CG Muthana, COO, MAHE Manipal, Dr. G Arun Maiya, Dean, Manipal College of Health Sciences, Dr. Anand Venugopal, COO, Teaching Hospital, MAHE, Manipal, Dr. Avinash Shetty, Medical Superintendent Kasturba Hospital, Manipal other senior management team were present.

Coastal News

# ಕಸ್ತೂರ್ಬಾ ಆಸ್ಪತ್ರೆಯ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್) 2022 ಉದ್ಘಾಟನೆ

ಮಣಿಪಾಲ ಡಿ.16 (**ಉಡುಪಿ ಟೈಮ್ಸ್ ವರದಿ**): ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಇದರ ವತಿಯಿಂದ ಕಾರ್ಪೊರೇಟ್ ಕಂಪನಿ , ಬ್ಯಾಂಕ್ ಗಳು , ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ.ಎಚ್ -ಸಿ ಸಿ ಎಲ್ )2022 ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಈ ವೇಳೆ ಮಾಹೆ ಮಣಿಪಾಲದ ಸಹ ಕುಲಾಧಿಪತಿ ಡಾ. ಎಚ್ ಎಸ್ ಬಲ್ಲಾಳ್ ಅವರು ಟ್ರೋಫಿ ಅನಾವರಣ ಮಾಡಿ ಮೊದಲ ಪಂದ್ಯಕ್ಕೆ ಟಾಸ್ ಮಾಡುವುದರ ಮೂಲಕ ಕಸ್ತೂರ್ಬಾ ಆಸ್ಪತ್ರೆ ಸಿ.ಸಿ.ಎಲ್ 2022 ಕ್ಕೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, "ಮಾಹೆ ಮಣಿಪಾಲವು ಯಾವಾಗಲೂ ಕ್ರೀಡೆ ಮತ್ತು ಇತರ ಪಠ್ಯೇತರ ಚಟುವಟಿಕೆಗಳಿಗೆ ತುಂಬಾ ಬೆಂಬಲ ನೀಡುತ್ತದೆ. ಇದರ ಅಂಗವಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್)2022 ಆಯೋಜಿಸಿದೆ" ಎಂದರು.



ಕಾರ್ಯಕ್ರಮದಲ್ಲಿ ಮಾಹೆ ಮಣಿಪಾಲದ ಉಪ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ) ಎಂ ಡಿ ವೆಂಕಟೇಶ್ ಅವರು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ 2023ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಷನ್ಸ್ ಇದರ ಡೀನ್ ಡಾ ಜಿ ಅರುಣ್ ಮಯ್ಯ , ಮಾಹೆ ಮಣಿಪಾಲದ ಸಿ.ಒ.ಒ ಸಿ.ಜಿ ಮುತ್ತಣ್ಣ , ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿ.ಒ.ಒ ಡಾ. ಆನಂದ್ ವೇಣುಗೋಪಾಲ್ , ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ರಿಕೆಟ್ ಟೂರ್ನಮೆಂಟ್ 16ನೇ ಡಿಸೆಂಬರ್ 2022ರಿಂದ 18ನೇ ಡಿಸೆಂಬರ್ 2022ರ ವರೆಗೆ ಮಣಿಪಾಲದ ಎಂಡ್ ಪಾಯಿಂಟ್ ಮೈದಾನದಲ್ಲಿ ನಡೆಯಲಿದೆ, ಕರ್ನಾಟಕದ ಬೇರೆ ಬೇರೆ ಜಿಲ್ಲೆಗಳ ಸುಮಾರು 24 ತಂಡಗಳು ಈ ವರ್ಷ ಭಾಗವಹಿಸುತ್ತಿವೆ.

# ಕಸ್ತೂರ್ಬಾ ಆಸ್ಪತ್ರೆಯ ಕಾರ್ಪೊರೇಟ್ ಕ್ರಿಕೆಟ್ ಲೀಗ್ ಉದ್ಘಾಟನೆ

By **Udupi Bulletin News Desk** - December 16, 2022 0



**ಮಣಿಪಾಲ:** ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪನಿ, ಬ್ಯಾಂಕ್ ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್ -ಸಿ ಸಿ ಎಲ್)2022 ಆಯೋಜಿಸಿದೆ.

ಶುಕ್ರವಾರ ನಡೆದ ಸರಳ ಕಾರ್ಯಕ್ರಮದಲ್ಲಿ ಮಾಹೆ ಮಣಿಪಾಲದ ಸಹ ಕುಲಾಧಿಪತಿಗಳಾದ ಡಾ. ಎಚ್ ಎಸ್ ಬಲ್ಲಾಳ್ ಅವರು ಟ್ರೋಫಿ ಅನಾವರಣ ಮಾಡಿ ಮೊದಲ ಪಂದ್ಯಕ್ಕೆ ಟಾಸ್ ಮಾಡುವುದರ ಮೂಲಕ ಕಸ್ತೂರ್ಬಾ ಆಸ್ಪತ್ರೆ ಸಿ ಸಿ ಎಲ್ 2022 ಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅವರು ಮಾತನಾಡುತ್ತಾ, ಮಾಹೆ ಮಣಿಪಾಲವು ಯಾವಾಗಲೂ ಕ್ರೀಡೆ ಮತ್ತು ಇತರ ಪಠ್ಯೇತರ ಚಟುವಟಿಕೆಗಳಿಗೆ ತುಂಬಾ ಬೆಂಬಲ ನೀಡುತ್ತದೆ.

ಇದರ ಅಂಗವಾಗಿ ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ -ಸಿ ಸಿ ಎಲ್)2022 ಆಯೋಜಿಸಿದೆ ಎಂದರು.

ಈ ಸಂದರ್ಭದಲ್ಲಿ ಮಾಹೆ ಮಣಿಪಾಲದ ಉಪ ಕುಲಪತಿ ಲೆಫ್ಟಿನೆಂಟ್ ಜನರಲ್ (ಡಾ.) ಎಂ ಡಿ ವೆಂಕಟೇಶ್ ಅವರು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ 2023ರ ಕ್ಯಾಲೆಂಡರ್ ಬಿಡುಗಡೆ ಮಾಡಿದರು.

ಮಣಿಪಾಲ್ ಕಾಲೇಜ್ ಆಫ್ ಹೆಲ್ತ್ ಪ್ರೊಫೆಷನ್ಸ್ ಇದರ ಡೀನ್ ಡಾ. ಜಿ ಅರುಣ್ ಮಯ್ಯ, ಮಾಹೆ ಮಣಿಪಾಲದ ಸಿಒಒ ಸಿಜಿ ಮುತ್ತಣ್ಣ, ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ. ಆನಂದ್ ವೇಣುಗೋಪಾಲ್, ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ರಿಕೆಟ್ ಟೂರ್ನಮೆಂಟ್ 16ನೇ ಡಿಸೆಂಬರ್ 2022ರಿಂದ 18ನೇ ಡಿಸೆಂಬರ್ 2022ರ ವರೆಗೆ ಮಣಿಪಾಲದ ಎಂಡ್ ಪಾಯಿಂಟ್ ಮೈದಾನದಲ್ಲಿ ನಡೆಯಲಿದೆ.

ಕರ್ನಾಟಕದ ಬೇರೆ ಬೇರೆ ಜಿಲ್ಲೆಗಳ ಸುಮಾರು 24 ತಂಡಗಳು ಈ ವರ್ಷ ಭಾಗವಹಿಸುತ್ತಿವೆ.

TAGS | REGIONAL NEWS | ಪ್ರಾದೇಶಿಕ

ಸುದ್ದಿ

# ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ ಸಮಾರೂಪ ಸಮಾರಂಭ

*By Janardhan Kodavoor/Team karavalixpress, December 19, 2022*




ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪನಿ , ಬ್ಯಾಂಕ್ ಗಳು , ವೈದ್ಯಕೀಯ ಸಂಘ , ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಾರ್ಪೊರೇಟ್ ಕ್ರಿಕೆಟ್ ಲೀಗ್ ( ಕೆ ಎಚ್ ಸಿ ಸಿ ಎಲ್ 2022) ಆಯೋಜಿಸಿತ್ತು. 16ನೇ ಡಿಸೆಂಬರ್ 2022ರಂದು ಆರಂಭವಾದ ಕೂಟವು ಇಂದು ಅಂತ್ಯಗೊಂಡಿತು. ಇಂದು ನಡೆದ ಸಮಾರೂಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ , ಶ್ರೀ ಹಾಕೆ ಅಕ್ಷಯ್ ಮಚ್ಛೀಂದ್ರ ಅವರು ಪಾಲ್ಗೊಂಡಿದ್ದರು.

ಎಲ್ಲಾ ತಂಡಗಳು ಒಟ್ಟುಗೂಡಿ 1, 20, 000 ರೂ. ಮೊತ್ತವನ್ನು ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ ನಿಧಿಗೆ ದೇಣಿಗೆಯಾಗಿ ನೀಡಿದರು. ಈ ಉದಾತ್ತ ಕಾರ್ಯವು ಹೆಚ್ಚು ಮೆಚ್ಚುಗೆ ಪಡೆದಿದೆ. ಚೆಕ್ ಅನ್ನು ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ ವಿಭಾಗದ ಮುಖ್ಯಸ್ಥರಾದ ಡಾ.ವಾಸುದೇವ ಭಟ್ ಅವರಿಗೆ ಹಸ್ತಾಂತರಿಸಲಾಯಿತು.

ಕೆ ಎಂ ಸಿ ಡೀನ್ ಡಾ. ಶರತ್ ಕೆ ರಾವ್ , ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿ ಓ ಓ ಡಾ ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ, ಡಾ ಕೀರ್ತಿನಾಥ್ ಬಲ್ಲಾಳ, ಶ್ರೀ ಸಚಿನ್ ಕಾರಂತ್ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ ಸಿ ಸಿ ಎಲ್ 2022) ನಲ್ಲಿ ಮಣಿಪಾಲ ಟೆಕ್ನಾಲಜಿ ಲಿಮಿಟೆಡ್ ಅವರು ವಿಜೇತರಾಗಿ ಉಡುಪಿ ಎಸ್ ಪಿ 11 ರನ್ನರ್ ಅಪ್ ಪ್ರಶಸ್ತಿ ಪಡೆದರು. ಪ್ರಶಾಂತ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ಕಾರ್ತಿಕ್ ಅವರು ಉತ್ತಮ ದಾಂಡಿಗ ಮತ್ತು ಸಿದ್ದೇಶ್ ಅವರು ಉತ್ತಮ ದಾಳಿಗಾರ ಪ್ರಶಸ್ತಿ ಪಡೆದರು.

# Kasturba Hospital Corporate Cricket League 2022 concludes




**Manipal Dec 18, 2022:** Manipal Technologist Ltd won the Kasturba Hospital Manipal Corporate Cricket League (CCL 2022) trophy.

The Corporate Cricket League (CCL 2022) organized by Kasturba Hospital Manipal held from Dec 16 to 18 concluded today with Manipal Technologist Ltd emerging as the winner.

The event was attended by corporate companies, banks, medical associations, hospitals, and the media. Hakey Akshay Machhindra, Superintendent of Police, was the chief guest of the valedictory ceremony.

All the teams contributed a total sum of Rs 1,20,000 towards the pediatric hematology and Oncology fund. This noble gesture is highly appreciated. The cheque was handed over to Dr. Vasudeva Bhat, in charge division of hematology and Oncology.

Dr. Sharath K Rao –Dean, KMC, Dr. Anand Venugopal, COO- Teaching Hospital, MAHE Manipal, and
Avinash Shetty -Medical Superintendent, Kasturba Hospital, Manipal, and other senior officials were present.

Manipal Technologist Ltd won the Kasturba Hospital Manipal Corporate Cricket League (CCL2022) trophy and SP Office-11 was the Runner-up. Prashanth was the man of the series and Karthik Bhat was the best batsman. Siddesh received the best bowler award.

ಸುದ್ದಿಗಳು ಪ್ರಾದೇಶಿಕ

# ಮಣಿಪಾಲ ಟೆಕ್ನಾಲಜಿ ಲಿಮಿಟೆಡ್ ಗೆ ಕೆಎಚ್ ಸಿಸಿಲ್ 2022 ಪ್ರಶಸ್ತಿ

By **Udupi Bulletin News Desk** - December 18, 2022 0




**ಮಣಿಪಾಲ:** ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೊರೇಟ್ ಕಂಪನಿ, ಬ್ಯಾಂಕ್ ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮದವರಿಗೆ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್ ಸಿಸಿಎಲ್ 2022) ಆಯೋಜಿಸಿತ್ತು.

ಡಿಸೆಂಬರ್ 16 ರಂದು ಆರಂಭವಾದ ಕೂಟವು ಭಾನುವಾರ ಅಂತ್ಯಗೊಂಡಿತು. ಭಾನುವಾರ ನಡೆದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಕೆ ಅಕ್ಷಯ್ ಮಚ್ಚೀಂದ್ರ ಅವರು ಪಾಲ್ಗೊಂಡಿದ್ದರು.

ಎಲ್ಲಾ ತಂಡಗಳು ಒಟ್ಟುಗೂಡಿ 1,20,000 ರೂ. ಮೊತ್ತವನ್ನು ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ ನಿಧಿಗೆ ದೇಣಿಗೆಯಾಗಿ ನೀಡಿದರು. ಈ ಉದಾತ್ತ ಕಾರ್ಯವು ಹೆಚ್ಚು ಮೆಚ್ಚುಗೆ ಪಡೆದಿದೆ. ಚೆಕ್ ನ್ನು ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ ವಿಭಾಗದ ಮುಖ್ಯಸ್ಥರಾದ ಡಾ. ವಾಸುದೇವ ಭಟ್ ಅವರಿಗೆ ಹಸ್ತಾಂತರಿಸಲಾಯಿತು.

ಕೆಎಂಸಿ ಡೀನ್ ಡಾ. ಶರತ್ ಕೆ ರಾವ್, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ. ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ, ಡಾ. ಕೀರ್ತಿನಾಥ್ ಬಲ್ಲಾಳ, ಸಚಿನ್ ಕಾರಂತ್ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್ ಸಿಸಿಎಲ್ 2022) ನಲ್ಲಿ ಮಣಿಪಾಲ ಟೆಕ್ನಾಲಜಿ ಲಿಮಿಟೆಡ್ ಅವರು ವಿಜೇತರಾಗಿ ಉಡುಪಿ ಎಸ್ ಪಿ 11 ರನ್ನರ್ ಅಪ್ ಪ್ರಶಸ್ತಿ ಪಡೆದರು. ಪ್ರಶಾಂತ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ಕಾರ್ತಿಕ್ ಉತ್ತಮ ದಾಂಡಿಗ ಮತ್ತು ಸಿದ್ದೇಶ್ ಉತ್ತಮ ದಾಳಿಗಾರ ಪ್ರಶಸ್ತಿ ಪಡೆದರು.

Coastal News

# ಮಣಿಪಾಲ ಟೆಕ್ನಾಲಜಿ ಲಿಮಿಟೆಡ್‌ಗೆ ಕೆಎಚ್‌ಸಿ ಸಿಲ್ – 2022 ಪ್ರಶಸ್ತಿ

December 18, 2022




ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಸಿಸಿಎಲ್-2022) ಸಮಾರೂಪ ಸಮಾರಂಭ

ಮಣಿಪಾಲ 19ನೇ ಡಿಸೆಂಬರ್ 2022:ಕಸ್ತೂರ್ಬಾ ಆಸ್ಪತ್ರೆ ಮಣಿಪಾಲವು ಕಾರ್ಪೋರೇಟ್ ಕಂಪನಿ , ಬ್ಯಾಂಕ್ ಗಳು , ವೈದ್ಯಕೀಯ ಸಂಘ , ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತವಾಗಿ ಕಾರ್ಪೋರೇಟ್ ಕ್ರಿಕೆಟ್ ಲೀಗ್ ( ಕೆ ಎಚ್ ಸಿ ಸಿ ಎಲ್ 2022) ಆಯೋಜಿಸಿತ್ತು. 16ನೇ ಡಿಸೆಂಬರ್ 2022ರಂದು ಆರಂಭವಾದ ಕೂಟವು ಇಂದು ಅಂತ್ಯಗೊಂಡಿತು. ಇಂದು ನಡೆದ ಸಮಾರೂಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ , ಶ್ರೀ ಹಾಕೆ ಅಕ್ಷಯ್ ಮಚ್ಛೇಂದ್ರ ಅವರು ಪಾಲ್ಗೊಂಡಿದ್ದರು.

ಎಲ್ಲಾ ತಂಡಗಳು ಒಟ್ಟುಗೂಡಿ 1, 20, 000 ರೂ. ಮೊತ್ತವನ್ನು ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ ನಿಧಿಗೆ ದೇಣಿಗೆಯಾಗಿ ನೀಡಿದರು. ಈ ಉದಾತ್ತ ಕಾರ್ಯವು ಹೆಚ್ಚು ಮೆಚ್ಚುಗೆ ಪಡೆದಿದೆ. ಚೆಕ್ ಅನ್ನು ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ ವಿಭಾಗದ ಮುಖ್ಯಸ್ಥರಾದ ಡಾ.ವಾಸುದೇವ ಭಟ್ ಅವರಿಗೆ ಹಸ್ತಾಂತರಿಸಲಾಯಿತು.

ಕೆಎಂಸಿ ಡೀನ್ ಡಾ.ಶರತ್ ಕೆ ರಾವ್, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿಒಒ ಡಾ. ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕರಾದ ಡಾ.ಅವಿನಾಶ ಶೆಟ್ಟಿ, ಡಾ.ಕೀರ್ತಿನಾಥ್ ಬಲ್ಲಾಳ, ಸಚಿನ್ ಕಾರಂತ್ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆಎಚ್ ಸಿಸಿಎಲ್-2022)ನಲ್ಲಿ ಮಣಿಪಾಲ ಟೆಕ್ನಾಲಜಿ ಲಿಮಿಟೆಡ್ ಅವರು ವಿಜೇತರಾಗಿ ಉಡುಪಿ ಎಸ್ ಪಿ 11 ರನ್ನರ್ ಆಪ್ ಪ್ರಶಸ್ತಿ ಪಡೆದರು.

ಪ್ರಶಾಂತ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ಕಾರ್ತಿಕ್ ಅವರು ಉತ್ತಮ ದಾಂಡಿಗ ಮತ್ತು ಸಿದ್ದೇಶ್ ಅವರು ಉತ್ತಮ ದಾಳಿಗಾರ ಪ್ರಶಸ್ತಿ ಪಡೆದರು.

# ಕಸ್ತೂರ್ಬಾ ಆಸ್ಪತ್ರೆ ಕಾರ್ಪೊರೇಟ್ ಕ್ರಿಕೆಟ್ ಲೀಗ್: ಚಾಂಪಿಯನ್ ಆಗಿ ಹೊರಹೊಮ್ಮಿದ ಮಣಿಪಾಲ ಟೆಕ್ನಾಲಜಿ ಲಿಮಿಟೆಡ್

December 19, 2022




ಮಣಿಪಾಲ: ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲವು ಕಾರ್ಪೊರೇಟ್ ಕಂಪನಿ, ಬ್ಯಾಂಕ್ ಗಳು, ವೈದ್ಯಕೀಯ ಸಂಘ, ಆಸ್ಪತ್ರೆಗಳು ಮತ್ತು ಮಾಧ್ಯಮ ಮಿತ್ರರಿಗಾಗಿ 3 ದಿನಗಳ ಕಾಲ ಸೌಹಾರ್ದಯುತ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ ಸಿ ಸಿ ಎಲ್ 2022) ಅನ್ನು ಆಯೋಜಿಸಿತ್ತು. ಡಿ.16 ಆರಂಭವಾದ ಪಂದ್ಯಾಟವು ಡಿ.೧೮ ರಂದು ಕೊನೆಗೊಂಡಿತು.

ಮುಖ್ಯ ಅತಿಥಿಯಾಗಿ ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಹಾಕೆ ಅಕ್ಷಯ್ ಮಚ್ಚೇಂದ್ರ ಪಾಲ್ಗೊಂಡಿದ್ದರು.

ಎಲ್ಲಾ ತಂಡಗಳು ಒಟ್ಟು 1,20,000 ರೂ. ಮೊತ್ತವನ್ನು ಮಕ್ಕಳ ರಕ್ತಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗಕ್ಕೆ ನಿಧಿಗೆ ದೇಣಿಗೆಯಾಗಿ ನೀಡಿದವು. ಚೆಕ್ ಅನ್ನು ಮಕ್ಕಳ ರಕ್ತ ಶಾಸ್ತ್ರ ಮತ್ತು ಆಂಕೊಲಾಜಿ ವಿಭಾಗ ವಿಭಾಗದ ಮುಖ್ಯಸ್ಥ ಡಾ.ವಾಸುದೇವ ಭಟ್ ಅವರಿಗೆ ಹಸ್ತಾಂತರಿಸಲಾಯಿತು.

ಈ ಸಂದರ್ಭದಲ್ಲಿ ಕೆಎಂಸಿ ಡೀನ್ ಡಾ. ಶರತ್ ಕೆ ರಾವ್, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಗಳ ಸಿ ಓ ಓ ಡಾ ಆನಂದ್ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ, ಡಾ ಕೀರ್ತಿನಾಥ್ ಬಲ್ಲಾಳ, ಸಚಿನ್ ಕಾರಂತ್ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕಸ್ತೂರ್ಬಾ ಆಸ್ಪತ್ರೆ ಮಣಿಪಾಲ ಕಾರ್ಪೊರೇಟ್ ಕ್ರಿಕೆಟ್ ಲೀಗ್ (ಕೆ ಎಚ್ ಸಿ ಸಿ ಎಲ್ 2022) ನಲ್ಲಿ ಮಣಿಪಾಲ ಟೆಕ್ನಾಲಜಿ ಲಿಮಿಟೆಡ್ ಅವರು ವಿಜೇತರಾಗಿ ಉಡುಪಿ ಎಸ್ ಪಿ 11 ರನ್ನರ್ ಅಪ್ ಪ್ರಶಸ್ತಿ ಪಡೆದರು. ಪ್ರಶಾಂತ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರೆ, ಕಾರ್ತಿಕ್ ಉತ್ತಮ ದಾಂಡಿಗ ಮತ್ತು ಸಿದ್ದೇಶ್ ಉತ್ತಮ ದಾಳಿಗಾರ ಪ್ರಶಸ್ತಿ ಪಡೆದರು.